# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1364
**ಸದಸ್ಯರ ಹೆಸರು** : ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು)
**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
**ಉತ್ತರಿಸಬೇಕಾದ ದಿನಾಂಕ** : 22.08.2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅಂಗನವಾಡಿ ಕೇಂದ್ರಗಳ ಮೂಲಕ ವಿತರಿಸುವ ಪೌಷ್ಠಿಕ ಆಹಾರವು ಕಳಪೆ ಗುಣಮಟ್ಟದ್ದಾಗಿರುವ ಬಗ್ಗೆ ದೂರುಗಳು ಕೇಳಿಬಂದಿವೆಯೇ; ಬಂದಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ದೂರುಗಳನ್ನು ಸ್ವೀಕರಿಸಲಾಗಿದೆ; (ವಿವರಗಳನ್ನು ಒದಗಿಸುವುದು) | ಅಂಗನವಾಡಿ ಕೇಂದ್ರಗಳಿಗೆ ಪೂರಕ ಪೌಷ್ಠಿಕ ಆಹಾರ ವಿತರಿಸುವ ಮುನ್ನ ಆಹಾರ ಪದಾರ್ಥಗಳನ್ನು ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸಿ, ಸೇವಿಸಲು ಯೋಗ್ಯ ಎಂಬ ವರದಿ ಬಂದ ನಂತರವೇ ಅವುಗಳನ್ನು ಅಂಗನವಾಡಿ ಕೇಂದ್ರಗಳ ಮೂಲಕ ಸರಬರಾಜು ಮಾಡುತ್ತಿದ್ದು, ಕಳಪೆ ಗುಣಮಟ್ಟದ ಆಹಾರ ಪೂರೈಕೆ ಆಗಿರುವುದಿಲ್ಲ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ FSSAI ಪ್ರಯೋಗಾಲಯಗಳು, 2024-25ನೇ ಸಾಲಿನಲ್ಲಿ 1,329 ಮಾದರಿಗಳನ್ನು ಮತ್ತು 2025-26ನೇ ಸಾಲಿನಲ್ಲಿ ಈವರೆವಿಗೆ 674 ಪೂರಕ ಪೌಷ್ಠಿಕ ಆಹಾರದ ಮಾದರಿಗಳನ್ನು ಅಂಗನವಾಡಿ ಕೇಂದ್ರಗಳಿಂದ ಸಂಗ್ರಹಿಸಿ ಪರೀಕ್ಷೆ ನಡೆಸಲಾಗಿದೆ. ಆದರೆ, ಈವರೆಗೆ ಯಾವುದೇ ಪ್ರತಿಕೂಲ ವರದಿ ಸ್ವೀಕೃತವಾಗಿರುವುದಿಲ್ಲ. |
| ಆ) | ಈ ಸಂಬಂಧ ಕಳಪೆ ಆಹಾರ ಸರಬರಾಜು ಮಾಡಿದ ಸಂಸ್ಥೆಗಳ ಮೇಲೆ ಕೈಗೊಂಡ ಕ್ರಮಗಳೇನು; | ಅಂಗನವಾಡಿ ಕೇಂದ್ರಗಳಿಗೆ ಎಂ.ಎಸ್.ಪಿ.ಸಿಗಳಿಂದ ಆಹಾರ ಸರಬರಾಜು ಆಗುತ್ತಿದ್ದು, ಯಾವುದೇ ಎಂ.ಎಸ್.ಪಿ.ಸಿ.ಗಳ ವಿರುದ್ಧ ದೂರುಗಳು ಬಂದ ಕೂಡಲೇ, ಅಂತಹ ಎಂ.ಎಸ್.ಪಿ.ಸಿ.ಗಳ ಕಾರ್ಯನಿರ್ವಹಣೆಯನ್ನು ಅಮಾನತುಗೊಳಿಸಲಾಗುತ್ತದೆ.<br><br>ಸದರಿ ಎಂ.ಎಸ್.ಪಿ.ಸಿಗಳು ತಮ್ಮ ನ್ಯೂನ್ಯತೆಗಳನ್ನು ಅಥವಾ ಲೋಪದೋಷಗಳನ್ನು ಸರಿಪಡಿಸಿಕೊಂಡ ಬಗ್ಗೆ ವಿವರವಾದ ವರದಿಯನ್ನು ಸಲ್ಲಿಸಿದ ನಂತರವೇ, ಅಂಗನವಾಡಿ ಕೇಂದ್ರಗಳಿಗೆ ಆಹಾರ ಪೂರೈಕೆ ಮಾಡಲು ಎಂ.ಎಸ್.ಪಿ.ಸಿ.ಗಳಿಗೆ ಅನುಮತಿ ನೀಡಲಾಗುತ್ತದೆ. |
| ಇ) | ರಾಜ್ಯದ ಎಲ್ಲ ಕಡೆಗಳಲ್ಲಿ ಕಾಲಕಾಲಕ್ಕೆ ಆಹಾರ ಪದಾರ್ಥಗಳ ಮಾದರಿಗಳನ್ನು ಪರೀಕ್ಷಿಸಲಾಗುತ್ತಿದೆಯೇ? | ಹೌದು.<br>i. ಅಂಗನವಾಡಿ ಕೇಂದ್ರಗಳಲ್ಲಿ ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳಿಗೆ ಆಹಾರವನ್ನು ವಿತರಿಸುವ ಮುನ್ನ ಗುಣಮಟ್ಟದ ಪರೀಕ್ಷೆಯನ್ನು NABL (National Accreditation Board for Testing and Calibration Laboratories)ನಿಂದ ಮಾನ್ಯತೆ ಪಡೆದ ಪ್ರಯೋಗಾಲಯಗಳ ಮೂಲಕ ಪ್ರತಿ ಮಾಹೆ ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸಲಾಗುತ್ತದೆ. |

......2

| | | |
|---|---|---|
| | | ii. ತದನಂತರ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಮಾದರಿಗಳನ್ನು ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸುತ್ತಾರೆ. ಆಹಾರ ವಿತರಿಸುವ ಮುನ್ನ ಹಾಗೂ ವಿತರಿಸಿದ ನಂತರ ಎಲ್ಲಾ ಹಂತಗಳಲ್ಲಿ ಆಹಾರ ಸಾಮಗ್ರಿಗಳ ಮಾದರಿಗಳ ಗುಣಮಟ್ಟ ಪರೀಕ್ಷೆ ನಡೆಸಲಾಗುತ್ತಿದೆ.<br><br>iii. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ FSSAI ಪ್ರಯೋಗಾಲಯಗಳು, Random ಆಗಿ ಅಂಗನವಾಡಿ ಕೇಂದ್ರಗಳಲ್ಲಿ ಪೂರಕ ಪೌಷ್ಟಿಕ ಆಹಾರದ ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸುತ್ತಿವೆ. |

**ಸಂಖ್ಯೆ: ಮಮಇ 236 ಐಸಿಡಿ 2025**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು